**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: ಬೆಳಗಾವಿ ಜಿಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿ 2014-15ನೇ ಸಾಲಿನಲ್ಲಿ ಸಿಎಂಜಿಎಸ್‌ವೈ ಲೆಕ್ಕ ಶೀರ್ಷಿಕೆ-3054 (Lumpsum) ಅಡಿ ಬೆಳಗಾವಿ ಜಿಲ್ಲೆಯ ಬೆಳಗಾವಿ ತಾಲ್ಲೂಕು ಮತ್ತು ಅಥಣಿ ತಾಲ್ಲೂಕು ವ್ಯಾಪ್ತಿಯಲ್ಲಿ ಕೈಗೊಂಡ ರಸ್ತೆ ಅಭಿವೃದ್ಧಿ ಕಾಮಗಾರಿಗಳ ಬಿಲ್ ಪಾವತಿಗೆ ರೂ.54.00ಲಕ್ಷ ಅನುದಾನ ಬಿಡುಗಡೆ ಮಾಡುವ ಕುರಿತು.

ಓದಲಾಗಿದೆ:
1. ಗ್ರಾಅಪ:9(5):ಆರ್‌ಆರ್‌ಸಿ:2014, ದಿ:08.07.2014.
2. ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ/113/ವೆಚ್ಚ-6/2015, ದಿನಾಂಕ: 09-06-2015.

**ಪ್ರಸ್ತಾವನೆ:**

ಬೆಳಗಾವಿ ಜಿಲ್ಲಾ ಪಂಚಾಯತಿಯಲ್ಲಿ 2014-15ನೇ ಸಾಲಿನಲ್ಲಿ ಸಿಎಂಜಿಎಸ್‌ವೈ ಲೆಕ್ಕ ಶೀರ್ಷಿಕೆ:3054(Lumpsum) ಅಡಿ ಬೆಳಗಾವಿ ಜಿಲ್ಲೆಯ ಬೆಳಗಾವಿ ತಾಲ್ಲೂಕಿನ ಹಿರೇಬಾಗೇವಾಡಿ ಗ್ರಾಮದಿಂದ ಬೆಂಡಿಗೇರಿ ರಸ್ತೆ ಸುಧಾರಣೆ ಮತ್ತು ಅಥಣಿ ತಾಲ್ಲೂಕಿನ ರೆಡ್ಡೇರಹಟ್ಟಿ ಗ್ರಾಮದ ಬಸವೇಶ್ವರ ದೇವಸ್ಥಾನದಿಂದ ತೋಟದ ರಸ್ತೆಯವರೆಗೆ ರಸ್ತೆ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡಿ ಮೇಲೆ ಓದಲಾದ-1ರಲ್ಲಿ ಇಲಾಖೆಯಿಂದ ಆದೇಶವನ್ನು ಹೊರಡಿಸಲಾಗಿತ್ತು.

ಸದರಿ ಆದೇಶದಂತೆ ಮೇಲೆ ಓದಲಾದ-2ರಲ್ಲಿ ಆರ್ಥಿಕ ಇಲಾಖೆಯು ಪ್ರಸ್ತುತ ಸಾಲಿನ ಲೆ.ಶೀ.3054-80-196-1-03-300(Lumpsum) ಅಡಿ ಪೂರ್ಣಗೊಂಡ ಕಾಮಗಾರಿಗಳ ಬಿಲ್ ಪಾವತಿಗಾಗಿ ಅನುದಾನ ಬಿಡುಗಡೆ ಮಾಡಲು ಸೂಚಿಸಿದನ್ವಯ ಪ್ರಸ್ತುತ ವರ್ಷದಲ್ಲಿ ಸಿ.ಎಂ.ಜಿ.ಎಸ್.ವೈ ಲೆ.ಶೀ.3054-80-196-1-03-300 (Lumpsum) ಅಡಿ ಬೆಳಗಾವಿ ಜಿಲ್ಲಾ ಪಂಚಾಯತಿಗೆ ರೂ.54.00ಲಕ್ಷಗಳನ್ನು ಬಿಡುಗಡೆ ಮಾಡಲು ಸರ್ಕಾರವು ತೀರ್ಮಾನಿಸಿರುತ್ತದೆ.

ಆದ್ದರಿಂದ ಈ ಆದೇಶ,

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:25/ವಿ:ಆರ್‌ಆರ್‌ಸಿ:15, ಬೆಂಗಳೂರು ದಿನಾಂಕ:18.06.2015.**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಪ್ರಸ್ತುತ 2015-16ನೇ ಸಾಲಿನ ಆರ್ಥಿಕ ವರ್ಷದಲ್ಲಿ ಬೆಳಗಾವಿ ಜಿಲ್ಲೆಯ ಬೆಳಗಾವಿ ತಾಲ್ಲೂಕು ಮತ್ತು ಅಥಣಿ ತಾಲ್ಲೂಕು ವ್ಯಾಪ್ತಿಯಲ್ಲಿ ಕೈಗೊಂಡ ರಸ್ತೆ ಅಭಿವೃದ್ಧಿ ಕಾಮಗಾರಿಗಳ ಬಿಲ್ ಪಾವತಿಗಾಗಿ ಲೆ.ಶೀ.3054-80-196-1-03-300(ಯೋಜನೆ) (Lumpsum) ಅಡಿ ರೂ.54.00 ಲಕ್ಷ (ಐವತ್ತ ನಾಲ್ಕು ಲಕ್ಷಗಳು ಮಾತ್ರ) ಗಳನ್ನು ಕೆಳಕಂಡ ಷರತ್ತಿಗೊಳಪಟ್ಟು ಬೆಳಗಾವಿ ಜಿಲ್ಲಾ ಪಂಚಾಯತಿಗೆ ಬಿಡುಗಡೆ ಮಾಡಲು ಸರ್ಕಾರವು ಹರ್ಷಿಸುತ್ತದೆ.

**ಷರತ್ತುಗಳು,**

1. ಜಿಲ್ಲಾ ಪಂಚಾಯತಿಗೆ ಬಿಡುಗಡೆ ಮಾಡಿದ ಅನುದಾನವನ್ನು 2014-15ನೇ ಸಾಲಿನಲ್ಲಿ ಬೆಳಗಾವಿ ಜಿಲ್ಲೆಯ ಬೆಳಗಾವಿ ತಾಲ್ಲೂಕು ಮತ್ತು ಅಥಣಿ ತಾಲ್ಲೂಕು ವ್ಯಾಪ್ತಿಯ ರಸ್ತೆ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಂಡು ಪೂರ್ಣಗೊಳಿಸಿದ ಕಾಮಗಾರಿಗಳಿಗೆ ಮಾತ್ರ ಉಪಯೋಗಿಸತಕ್ಕದ್ದು. ಈ ಅನುದಾನವನ್ನು ಮಾರ್ಗ ಪಲ್ಲಟಮಾಡುವಂತಿಲ್ಲ. ಹಾಗೂ ಯಾವುದೇ ಕಾರಣಕ್ಕೂ ವ್ಯಪಗತವಾಗದಂತೆ ನೋಡಿಕೊಳ್ಳತಕ್ಕದ್ದು.

2. ಬಳಕೆಯಾದ ಹಣ ಮತ್ತು ಕಾಮಗಾರಿ ಪ್ರಗತಿಯನ್ನು ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ ರವರಿಗೆ ಒದಗಿಸತಕ್ಕದ್ದು.

3. ಪ್ರಸ್ತುತ ಈ ಶೀರ್ಷಿಕೆಯಡಿ ಜಿಲ್ಲಾ ಪಂಚಾಯತಿ ಅನುಷ್ಠಾನಗೊಳಿಸಿರುವ ರಸ್ತೆ ಕಾಮಗಾರಿಗಳನ್ನು **Worksoft works monitoring** ಪದ್ಧತಿ ಮುಖಾಂತರ ಉಸ್ತುವಾರಿ ಮಾಡಬೇಕಾಗಿದ್ದು, ಈ ಸಂಬಂಧ ಪೂರ್ಣ ಮಾಹಿತಿಯನ್ನು **Worksoft website** ನಲ್ಲಿ ತಪ್ಪದೇ ಅಳವಡಿಸತಕ್ಕದ್ದು.

4. 2014-15ನೇ ಸಾಲಿನಿಂದ ಇಲಾಖೆಯಿಂದ ಅನುಷ್ಠಾನಗೊಳ್ಳಿಸುತ್ತಿರುವ ಅನುಮೋದನೆಗೊಂಡ ಕ್ರಿಯಾ ಯೋಜನೆಯಲ್ಲಿರುವ ಎಲ್ಲಾ ಯೋಜನೆಗಳ ಎಲ್ಲಾ ಕಾಮಗಾರಿಗಳ ವಿವರಗಳನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಅಳವಡಿಸಿ ಹಣ ಪಾವತಿಸಲು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಿಂದ ಪಡೆಯಲಾದ ಪಾವತಿ ಆದೇಶವಿದ್ದಲ್ಲಿ ಮಾತ್ರ ಕಾಮಗಾರಿಗಳ ಬಿಲ್ಲುಗಳ ಪಾವತಿಯನ್ನು ಕಡ್ಡಾಯವಾಗಿ ಮಾಡುವಂತೆ. ಹಾಗೂ ಸರ್ಕಾರದ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಸೂಚಿಸಲಾಗಿದೆ. ಅದರಂತೆ ಈ ಆದೇಶದಲ್ಲಿ ಬಿಡುಗಡೆ ಮಾಡಿರುವ ಅನುದಾನಕ್ಕೆ ಸಂಬಂಧಿಸಿದಂತೆ ಕೈಗೊಂಡು ಪೂರ್ಣಗೊಳಿಸಿರುವ ಕಾಮಗಾರಿಗಳನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಅಳವಡಿಸಿರುವ ನಿಬಂಧನೆಗೆ ಒಳಪಡಿಸಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ/113/ವೆಚ್ಚ-6/2015, ದಿನಾಂಕ: 09-06-2015 ರಲ್ಲಿ ತಿಳಿಸಿದ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬೂವನಹಳ್ಳಿ ನಾಗರಾಜ್)
ನಿರ್ದೇಶಕರು
ಸುವರ್ಣ ಗ್ರಾಮೋದಯ ಯೋಜನೆ ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಪ್ರತಿಯನ್ನು:**

1. ಮಹಾಲೇಖಪಾಲರು (ಲೆಕ್ಕಪತ್ರ), ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಆಡಿಟ್-1), ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಆಡಿಟ್-2), ಕರ್ನಾಟಕ, ಬೆಂಗಳೂರು.
4. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
5. ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನ ಸೌಧ, ಬೆಂಗಳೂರು
6. ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು
7. ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (PMU)(IF),5ನೇ ಹಂತ, ಬಹುಮಹಡಿ ಕಟ್ಟಡ, ಬೆಂಗಳೂರು
8. ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.

9. ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
10. ವಿಶೇಷಾಧಿಕಾರಿಗಳು (ಜಿಪಂ) ಮತ್ತು ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ, ಆರ್ಥಿಕ ಇಲಾಖೆ ವಿಧಾನ ಸೌಧ, ಬೆಂಗಳೂರು
11. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
12. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
13. ಉಪ ನಿರ್ದೇಶಕರು, ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ಟ್ರೆಜರಿ ಡಿಪಾರ್ಟ್‌ಮೆಂಟ್, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
14. ಜಿಲ್ಲಾ ಖಜಾನಾಧಿಕಾರಿಗಳು, ಬೆಳಗಾವಿ ಜಿಲ್ಲೆ.
15. ಅಧೀನ ಕಾರ್ಯದರ್ಶಿಗಳು (ವೆಚ್ಚ-6), ಜಿ.ಪಂ. ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
16. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು-9
17. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಬೆಳಗಾವಿ.
18. ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಐ.ಡಿ.ಎಲ್. ಬೆಂಗಳೂರು.
19. ಅಧೀಕ್ಷಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ, ಬೆಳಗಾವಿ.
20. ಮಾಹಿತಿ ಕೇಂದ್ರದ ಗಣಕ ಕೋಶ ಮುಖ್ಯಸ್ಥರು, ಗ್ರಾಅಪಂರಾ ಇಲಾಖೆ ಇವರಿಗೆ ಇಲಾಖೆಯ ಅಂತರ್ಜಾಲದಲ್ಲಿ ಅಳವಡಿಸಲು ಹಾಗೂ ಗ್ರೂಪ್ ಮೈಲ್ ನಲ್ಲಿ ರವಾನಿಸಲು ಸೂಚಿಸಿದೆ
21. ರಕ್ಷಾ ಕಡತ / ಹೆಚ್ಚುವರಿ ಪ್ರತಿ.

---